## ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ನೇಮಕಾತಿ
**ಅಭ್ಯರ್ಥಿಗಳಿಗೆ ವಿಶೇಷ ಸೂಚನೆಗಳು**

1. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರ ನೇಮಕಾತಿ ಸಂಬಂಧ ಸ್ಪರ್ಧಾತ್ಮಕ ಪರೀಕ್ಷೆಯನ್ನು ದಿನಾಂಕ **29-11-2018** ರಿಂದ **08-12-2018**ರ ವರೆಗೆ ನಡೆಸಲಾಗುವುದು. ಸ್ಪರ್ಧಾತ್ಮಕ ಪರೀಕ್ಷೆಯ ಪರಿಷ್ಕೃತ ವೇಳಾಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದೆ.
2. ಸದರಿ ಸ್ಪರ್ಧಾತ್ಮಕ ಪರೀಕ್ಷೆಯ ಪ್ರವೇಶ ಪತ್ರಗಳನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿಕೊಂಡು ಅಭ್ಯರ್ಥಿಗಳು ತಮ್ಮ ಆನ್‌ಲೈನ್ ಅರ್ಜಿ ಸಂಖ್ಯೆಯನ್ನು ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

**ಒಂದಕ್ಕಿಂತ ಹೆಚ್ಚು ವಿಷಯಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಗಮನಕ್ಕೆ**

3. ಒಂದಕ್ಕಿಂತ ಹೆಚ್ಚು ವಿಷಯಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು, ಅರ್ಜಿ ಸಲ್ಲಿಸಿರುವ ಎಲ್ಲಾ ವಿಷಯಗಳಿಗೆ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಆಯಾ ವಿಷಯಗಳ ದಿನಾಂಕದಂದು ನಿಗದಿಪಡಿಸಿರುವ ಕೇಂದ್ರದಲ್ಲಿ ಪರೀಕ್ಷೆಗೆ ಹಾಜರಾಗಬೇಕು, ಆದರೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗೆ ಕೇವಲ ಒಂದು ಕೇಂದ್ರದಲ್ಲಿ ಮಾತ್ರ ಹಾಜರಾಗಬೇಕು. ಸದರಿ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಯ ಹಾಜರಾತಿಯನ್ನು ಇತರೆ ವಿಷಯಗಳಿಗೆ ಪರಿಗಣಿಸಲಾಗುವುದು. ಕಡ್ಡಾಯ ಕನ್ನಡ ಭಾಷಾ ಪರೀಕ್ಷೆಗೆ ಒಂದಕ್ಕಿಂತ ಹೆಚ್ಚು ಕೇಂದ್ರಗಳಲ್ಲಿ ಹಾಜರಾಗುವಂತಿಲ್ಲ.

**ಒಂದೇ ವಿಷಯಕ್ಕೆ ಎರಡು ಅಥವಾ ಅದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸಿರುವವರ ಗಮನಕ್ಕೆ**

4. ಒಂದೇ ವಿಷಯಕ್ಕೆ ಎರಡು ಅಥವಾ ಅದಕ್ಕಿಂತ ಹೆಚ್ಚು ಬಾರಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ನೀಡಲಾಗಿದೆ. ಅಂತಹ ಅಭ್ಯರ್ಥಿಗಳು ತಮಗೆ ಸೂಕ್ತವಾದ ಒಂದು ಪ್ರವೇಶ ಪತ್ರವನ್ನು ಮಾತ್ರ ಡೌನ್‌ಲೋಡ್ ಮಾಡಿಕೊಂಡು, ಆ ಪ್ರವೇಶ ಪತ್ರದ ಅನ್ವಯ ಎಲ್ಲಾ ಪತ್ರಿಕೆಗಳಿಗೆ ಒಂದು ಕೇಂದ್ರದಲ್ಲಿ ಮಾತ್ರ ಒಂದೇ ರಿಜಿಸ್ಟರ್ ನಂಬರ್ ಅಡಿಯಲ್ಲಿ ಪರೀಕ್ಷೆಯನ್ನು ಬರೆಯತಕ್ಕದ್ದು.

ದಿನಾಂಕ: 20-11-2018

ಕಾರ್ಯನಿರ್ವಾಹಕ ನಿರ್ದೇಶಕರ ಪರವಾಗಿ

ಬೆಂಗಳೂರು